Crl.Misc.576/2021

PW-1

**ಸಾಕ್ಷಿಯನ್ನು ಇಂದು ದಿನಾಂಕ 01.12.2023 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ಶ್ರೀ ಆರ್. ಎಮ್. ಎದುರುದಾರ ಪರ ವಕೀಲರಿಂದ**

ನಾನು ಎದುರುದಾರನ ಕಾನೂನು ಬದ್ಧ ಹೆಂಡತಿ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಎದುರುದಾರನ ಜೊತೆ ನಾನು ದಿನಾಂಕ 19.05.2014 ರಂದು ಸಜ್ಜನ ಶೆಟ್ಟಿ ಕಲ್ಯಾಣ ಮಂಟಪದಲ್ಲಿ ವಿವಾಹವಾಗಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಎದುರುದಾರನಿಗೆ 50 ಸಾವಿರ ರೂಪಾಯಿ ಹಾಗೂ ಬಂಗಾರ ಉಡುಗೊರೆಯಾಗಿ ನೀಡಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಆಶಾ ಕಾರ್ಯಕರ್ತೆಯಾಗಿ ಕೆಲಸ ಮಾಡುತ್ತೇನೆ ಎಂದರೆ ಸರಿಯಲ್ಲ. ನನಗೆ ತಿಂಗಳಿಗೆ 15 ಸಾವಿರ ರೂಪಾಯಿ ಸಂಬಳವಿರುತ್ತದೆ ಎಂದರೆ ಸರಿಯಲ್ಲ. ನನ್ನ ಗಂಡ ಪೌರಕಾರ್ಮಿಕನಾಗಿ ತಿಂಗಳಿಗೆ 25 ಸಾವಿರ ರೂಪಾಯಿ ಸಂಬಳ ಪಡೆಯುತ್ತಾನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಈಗ ನನ್ನ ತಂದೆ-ತಾಯಿಯ ಮನೆಯಲ್ಲಿ ಇರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಎದುರುದಾರ ಪೌರ ಕಾರ್ಮಿಕನಾಗಿ ಕೆಲಸ ಮಾಡುತ್ತಿರುತ್ತಾನೆ ಎಂದು ತೋರಿಸಲು ಯಾವುದೇ ಕಾಗದ ಪತ್ರ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ ಎದುರುದಾರರು ಹೊಸ ಮನೆ ಕಟ್ಟಿರುತ್ತಾರೆ ಎಂದರೆ ಸರಿ. ಎದುರುದಾರ ಸಾಲ ಪಡೆದು ಮನೆ ಕಟ್ಟಿರುತ್ತಾನೆ ಎಂದರೆ ಸರಿಯಲ್ಲ. ಈಗಲೂ ಸಹ ಎದುರುದಾರ ನನ್ನನ್ನು ತನ್ನೊಂದಿಗೆ ಕರೆದುಕೊಂಡು ಹೋಗಲು ತಯಾರು ಇರುತ್ತಾನೆ ಎಂದರೆ ಸರಿಯಲ್ಲ. ಎದುರುದಾರನಿಗೆ ತಾಯಿ ಮಾತ್ರ ಇರುತ್ತಾರೆ ಎದುರುದಾರನ ತಾಯಿಗೆ ಅನಾರೋಗ್ಯವಿರುತ್ತದೆ ಎಂದರೆ ಸರಿಯಲ್ಲ. ನಾನು ಎದುರುದಾರನ ಜೊತೆಗೆ ಮತ್ತು ಅವನ ಮನೆಯವರ ಜೊತೆಗೆ ವಿನಾಃಕಾರಣ ತಂಟೆ ಮಾಡಿ ನನ್ನ ತವರು ಮನೆಗೆ ಬಂದಿರುತ್ತೇನೆ ಎಂದರೆ ಸರಿಯಲ್ಲ. ನಾನು ಎದುರುದಾರರ ವಿರುದ್ಧ 498 ಎ ಅಡಿಯಲ್ಲಿ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಯಾವುದೇ ಕೆಲಸ ಬರುವುದಿಲ್ಲ ಎಂಬುವುದಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಆಶಾ ಕಾರ್ಯಕರ್ತೆ ಇದ್ದು ಸಂಬಳ ಪಡೆಯುವುದರಿಂದ ನನ್ನ ಜೀವನಾಂಶವನ್ನು ನಾನೇ ನೋಡಿಕೊಳ್ಳುವ ಆರ್ಥಿಕ ಪರಿಸ್ಥಿತಿ ಹೊಂದಿರುತ್ತೇನೆ ಎಂದರೆ ಸರಿಯಲ್ಲ. ಎದುರುದಾರ ನನಗೆ ಕಿರುಕುಳ ನೀಡಿರುತ್ತಾನೆ ಎಂದು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು) ಓ. ಹೇ. ಕೇ. ಸರಿ ಇದೆ.

ಸಹಿ/-

ಪ್ರ. ದ. ನ್ಯಾ ದಂ., ಸೇಡಂ.

*SYH